ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ:36:ಯೋಜನೆ:ವೆಅಂ:2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,

ಬೆಂಗಳೂರು. ದಿನಾಂಕ: 27-09-2022

## ಸುತ್ತೋಲೆ

ವಿಷಯ: 2023-24ನೇ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಕಛೇರಿ ವೆಚ್ಚ, ದೂರವಾಣಿ ವೆಚ್ಚ, ವಿದ್ಯುತ್ ವೆಚ್ಚ, ನೀರಿನ ವೆಚ್ಚ, ಪಠ್ಯಪುಸ್ತಕ ಹಾಗೂ ಪೀಠೋಪಕರಣ ಮತ್ತು ಇತರೆ ವೆಚ್ಚಗಳಿಗೆ ಅವಶ್ಯವಿರುವ ಅನುದಾನದ ಕುರಿತು.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಕಛೇರಿ ವೆಚ್ಚ ದೂರವಾಣಿ ವೆಚ್ಚ, ವಿದ್ಯುತ್ ವೆಚ್ಚ, ನೀರಿನವೆಚ್ಚ, ಪಠ್ಯಪುಸ್ತಕ ಹಾಗೂ ಪೀಠೋಪಕರಣ ಮತ್ತು ಇತರೆ ವೆಚ್ಚಗಳಿಗೆ ಅವಶ್ಯವಿರುವ ಅನುದಾನಕ್ಕೆ ಸಂಬಂಧಿಸಿದಂತೆ 2022-2023 ಮತ್ತು 2023-24ನೇ ಸಾಲುಗಳ ಮಾಹಿತಿಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಿರುವ ಗೂಗಲ್ ಫಾರಂ (**GOOGLE FORM**)ನಲ್ಲಿ ದಿ:30.09.2022ರ ಒಳಗೆ ಅಪ್‌ಲೋಡ್ ಮಾಡುವಂತೆ ತಿಳಿಸಲಾಗಿದೆ. ಸದರಿ ಮಾಹಿತಿಯು 2023-24ನೇ ಸಾಲಿನ ಆಯವ್ಯಯ ಅಂದಾಜು ಸಿದ್ಧಪಡಿಸಲು ಅವಶ್ಯಕವಾಗಿದ್ದು, ಪ್ರಾಂಶುಪಾಲರುಗಳು ವೈಯಕ್ತಿಕ ಗಮನ ಹರಿಸಿ ಮಾಹಿತಿ ಅಪ್‌ಲೋಡ್ ಮಾಡಲು ತಿಳಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಗೆ,

1) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳು.
2) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ-ಬೆಂಗಳೂರು,ಮೈಸೂರು,ಮಂಗಳೂರು, ಶಿವಮೊಗ್ಗ, ಧಾರವಾಡ ಮತ್ತು ಕಲಬುರಗಿ-ಮೇಲುಸ್ತುವಾರಿ ವಹಿಸಿ ಮಾಹಿತಿಯನ್ನು ಅಪ್‌ಲೋಡ್ ಮಾಡಿಸಲು ಕ್ರಮವಹಿಸುವುದು.
3) ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ ಕೇಂದ್ರ ಕಚೇರಿ,ಬೆಂಗಳೂರು-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.